ಕರ್ನಾಟಕ ಸರ್ಕಾರ

# ಜಿಲ್ಲಾ ಸಮಾದೇಷ್ಟರ ಕಾರ್ಯಾಲಯ
# ಗೃಹರಕ್ಷಕ ದಳ ಉತ್ತರ ಕನ್ನಡ ಜಿಲ್ಲೆ, ಕಾರವಾರ


ಸರ್ವೋದಯ ನಗರ, ದಿವೇಕರ್ ಕಾಮರ್ಸ ಕಾಲೇಜು ಎದುರುಗಡೆ, ವಿಜ್ಞಾನ ಕೇಂದ್ರ ಹತ್ತಿರ, ಕೋಡಿಬಾಗ, ಕಾರವಾರ-581303

Email: hgukkar@yahoo.com Office Ph No: 08382-226361


ಸಂಖ್ಯೆ:ಉಕಜಿ:ಗೃದ(1)290/ಆಡಳಿತ:2023-24 20.02.2024

ರಿಗೆ,

ಸಹಾಯಕ ನಿರ್ದೇಶಕರು
ವಾರ್ತಾ ಮತ್ತು ಪ್ರಸಾರ ಇಲಾಖೆ
ಕಾರವಾರ

ಮಾನ್ಯರೇ,

ವಿಷಯ: ಗೃಹರಕ್ಷಕ ನೇಮಕಾತಿ ಬಗ್ಗೆ ಪತ್ರಿಕಾ ಪ್ರಕಟಣೆ ನೀಡುವ ಕುರಿತು

****************************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗೃಹರಕ್ಷಕ ನೇಮಕಾತಿ ಕುರಿತು ವಿವರವಾದ ಪತ್ರಿಕಾ ಪ್ರಕಟಣೆಯಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದ್ದು, ಈ ಮೂಲಕ ಪತ್ರಿಕಾ ಪ್ರಕಟಣೆ ನೀಡಲಾಗಿದೆ. ಈ ವಿಷಯವನ್ನು ಎಲ್ಲಾ ದಿನಪತ್ರಿಕೆ/ಟಿ ವಿ ಮಾಧ್ಯಮಗಳಲ್ಲಿ ಸುದ್ದಿ ಬಿತ್ತರಿಸಲು ಕೋರಲಾಗಿದೆ

ವಂದನೆಗಳೊಂದಿಗೆ,

ತಮ್ಮ ನಂಬುಗೆಯ,

20/02/24

ಸಮಾದೇಷ್ಟರು,
ಗೃಹರಕ್ಷಕದಳ, ಉತ್ತರ ಕನ್ನಡ ಜಿಲ್ಲೆ,
ಕಾರವಾರ

# ನೂತನ ಸ್ವಯಂ ಸೇವಕ ಗೃಹರಕ್ಷಕರ ಭರ್ತಿಗೆ ಅರ್ಜಿ ಆಹ್ವಾನ

ಕರಾವಳಿ ಮುಂಜಾವು ವರದಿ

**ಕಾರವಾರ:** ಉತ್ತರ ಕನ್ನಡ ಜಿಲ್ಲಾ ಗೃಹರಕ್ಷಕ ದಳದಲ್ಲಿ ಪ್ರಸ್ತುತ ಖಾಲಿ ಇರುವ ಕಾರವಾರ, ಚೆಂಡಿಯಾ, ಮಲ್ಲಾಪುರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಸಿದ್ದಾಪುರ, ಶಿರಸಿ, ಯಲ್ಲಾಪುರ, ಹಳಿಯಾಳ, ದಾಂಡೇಲಿ, ಜೊಯಿಡಾ ಘಟಕ, ಉಪಘಟಕಗಳ 202 ಸ್ವಯಂ ಸೇವಕ ಗೃಹರಕ್ಷಕ, ಗೃಹರಕ್ಷಕಿಯರ ಭರ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಗೃಹ ರಕ್ಷಕದಳದ ಜಿಲ್ಲಾ ಸಮಾದೇಷ್ಟ ಡಾ. ಸಂಜು ಟಿ. ನಾಯಕ ತಿಳಿಸಿದ್ದಾರೆ

ಈ ತಾಲೂಕು ವ್ಯಾಪ್ತಿಯಲ್ಲಿರುವ ಅರ್ಹ ಅಭ್ಯರ್ಥಿಗಳು ದಿನಾಂಕ: 20-02-2024 ರಿಂದ 28-02-2024ರವರೆಗೆ ಜಿಲ್ಲಾ ಸಮಾದೇಷ್ಟರ ಕಚೇರಿ, ಗೃಹರಕ್ಷಕ ದಳ, ಸರ್ವೋದಯ ನಗರ ದಿವೇಕರ್ ಕಾಮರ್ಸ್ ಕಾಲೇಜು ಎದುರಿಗೆ, ಕೋಡಿಬಾಗ, ಕಾರವಾರ ಇಲ್ಲಿ 10ನೇ ತರಗತಿಯ ಅಂಕಪಟ್ಟಿ ಧೃಢೀಕೃತ ಪ್ರತಿ, ಆಧಾರ್ ಕಾರ್ಡ್ ಪ್ರತಿಯನ್ನು ತೋರಿಸಿ ಉಚಿತವಾಗಿ ಅರ್ಜಿಗಳನ್ನು ಪಡೆದುಕೊಳ್ಳಬಹುದಾಗಿದೆ.

ಅರ್ಜಿ ಭರ್ತಿ ಮಾಡಿ ಪತ್ರಾಂಕಿತ ಅಧಿಕಾರಿಗಳಿಂದ ಧೃಢೀಕರಿಸಲ್ಪಟ್ಟ ಆಧಾರ್ ಕಾರ್ಡ್ ಪ್ರತಿ, ಎಸ್.ಎಸ್.ಎಲ್.ಸಿ ಅಂಕಪಟ್ಟಿಯ ನಕಲು ಪ್ರತಿ ಮತ್ತು ತಾಲೂಕಾ ವೈದ್ಯಾಧಿಕಾರಿಗಳಿಂದ ಪಡೆದ ದೈಹಿಕ ಸದೃಡತೆ ಪ್ರಮಾಣ ಪತ್ರಗಳನ್ನು ಲಗತ್ತಿಸಿ ಸಲ್ಲಿಸಬೇಕು. ಅಭ್ಯರ್ಥಿಯು _ಯಾವುದೇ ಆಪಾದಿತ ಹಿನ್ನೆಲೆ ಹೊಂದಿರಬಾರದು

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 28-02-2024 ರ ಸಂಜೆ 5 ಗಂಟೆಗೆ ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಗೃಹರಕ್ಷಕ ದಳ ಕಚೇರಿ ಕಾರವಾರ, ಸಂಪರ್ಕ ಸಂಖ್ಯೆ: 08382-200137/226361 ನ್ನು



ಸಂಪರ್ಕಿಸಬಹುದಾಗಿದೆ.

ಕೌಶಲ್ಯ ತರಬೇತಿ (ಕಂಪ್ಯೂಟರ್ ಜ್ಞಾನ, ಹೆವಿ ಡ್ರೈವಿಂಗ್ ಲೈಸೆನ್ಸ್, ಅಡುಗೆ ಭಟ್ಟರು, ಮೆಕಾನಿಕ್, ಪೈಂಟರ್ ಮತ್ತು ಪ್ಲಂಬರ್), ಎನ್.ಸಿ.ಸಿ ಹಾಗೂ ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

10ನೇ ತರಗತಿ ಉತ್ತೀರ್ಣ, ವಯೋಮಿತಿ: ಕನಿಷ್ಠ 19ರಿಂದ 50 ವರ್ಷದೊಳಗಿರಬೇಕು. ಎತ್ತರ: ಕನಿಷ್ಠ 163 ಸೆ.ಮೀ ಪುರುಷರಿಗೆ, 150 ಸೆಂ.ಮೀ ಮಹಿಳೆಯರು ಅರ್ಜಿ ಸಲ್ಲಿಸಬಹುದಾಗಿದ್ದು, ಗೃಹರಕ್ಷಕ ದಳ ಸಂಸ್ಥೆಯು ಸ್ವಯಂ ಸೇವಕ ಸಂಸ್ಥೆಯಾಗಿದ್ದು, ಇದು ಖಾಯಂ ನೌಕರಿಯಾಗಿರುವುದಿಲ್ಲ ಮತ್ತು ಯಾವುದೇ ರೀತಿಯ ಮಾಸಿಕ ಸಂಬಳ/ ವಿಶೇಷ ಭತ್ಯೆಗಳನ್ನು ಈ ಸಂಸ್ಥೆಯು ನೀಡುವುದಿಲ್ಲ. ಸರ್ಕಾರವು ನಿಗದಿ ಪಡಿಸಿರುವ ಗೌರವ ಧನವನ್ನು ಕರ್ತವ್ಯ ನಿರ್ವಹಿಸುವ ಅವಧಿಗೆ ಮಾತ್ರ ಪಾವತಿಸಲಾಗುವುದು ಎಂದು ಗೃಹರಕ್ಷಕ ದಳದ ಜಿಲ್ಲಾ ಸಮಾದೇಷ್ಟ ಡಾ. ಸಂಜು ಟಿ. ನಾಯ್ಕ ತಿಳಿಸಿದ್ದಾರೆ.